ರಾಣೆಬೆನ್ನೂರು ತಾಲ್ಲೂಕು, ಹಲಗೇರಿ ಗ್ರಾಮದವರಿಗೆ ಕುಡಿಯಲು ನೀರಿನ ಸೌಲಭ್ಯ ಒದಗಿಸುವುದು.

೧೩೧೪. ಶ್ರೀ ಬಿ. ಜಿ. ಕೊಟ್ರಪ್ಪ (ಹರಿಹರ).—ಮಾನ್ಯ ಗ್ರಾಮಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ವತ್ಪ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಣೆಬೆನ್ನೂರು ತಾಲ್ಲೂಕು ಹಲಗೇರಿ ಗ್ರಾಮದವರು ಕುಡಿಯುವ ನೀರಿನ ಬವಣೆಪಡುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಆ ಗ್ರಾಮದವರಿಗೆ ಹತ್ತಿರವಿರುವ ತುಂಗಭದ್ರ ನದಿಯಿಂದ ನೀರನ್ನು ಒದಗಿಸಲು ಸರ್ಕಾರದವರು ಕ್ರಮ ತೆಗೆದುಕೊಳ್ಳುವರೆ ? ಹಾಗಿದ್ದಲ್ಲಿ ಎಷ್ಟು ಸಮಯದಲ್ಲಿ ?

ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) —

ಅ) ಬಂದಿದೆ.

ಆ) ತುಂಗಭದ್ರಾ ನದಿಯಿಂದ ಕುಡಿಯುವ ನೀರು ಒದಗಿಸುವ ಯೋಜನೆ ಇಲ್ಲ.

ಜಮಖಂಡಿಯಲ್ಲಿ ಹಾಲಿನ ಕೇಂದ್ರ ಪ್ರಾರಂಭಿಸುವುದು.

೧೧೫೭. ಶ್ರೀ ಜಿ. ಎಸ್. ಬಾಗಲಕೋಟೆ (ಜಮಖಂಡಿ).—ಮಾನ್ಯ ಪಶುವೈದ್ಯ ಹಾಗೂ ಪಶು ಸಂಗೋಪನಾ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಜಮಖಂಡಿ ತಾಲ್ಲೂಕ್ ಕೃಷ್ಣಾನದಿ ತೀರದಲ್ಲಿದ್ದು, ಅಲ್ಲಿ ಹಾಲು ಉತ್ಪಾದನೆಗೆ ಅವಕಾಶ ಗಳಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ;

ಆ) ಹಾಗಿದ್ದಲ್ಲಿ ಹಾಲು ಶೇಖರಿಸುವ ಕೇಂದ್ರ ಸ್ಥಾಪಿಸುವುದು ಯೋಗ್ಯವಲ್ಲವೆ ;

ಇ) ಈ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಶ್ರೀ ಸಿದ್ದರಾಮಯ್ಯ (ಪಶುವೈದ್ಯ ಹಾಗೂ ಪಶು ಸಂಗೋಪನಾ ಮಂತ್ರಿಗಳು).—

ಅ) ಬಂದಿದೆ.

ಆ) ಹೌದು.

ಇ) ಜಮಖಂಡಿ ತಾಲ್ಲೂಕಿನಲ್ಲಿ ಅಮೂಲ್ ಮಾದರಿಯ ಹಾಲು ಉತ್ಪಾದಕರ ಸಹಕಾರಿ ಸಂಘಗಳನ್ನು ಸ್ಥಾಪಿಸಲಾಗುತ್ತಿದೆ.

ಜಮಖಂಡಿ ತಾಲ್ಲೂಕ್ ಕಲ್ಲಳ್ಳಿ ಗ್ರಾಮಕ್ಕೆ ಕುಡಿಯಲು ನೀರಿನ ಸೌಲಭ್ಯ

೧೧೫೬. ಶ್ರೀ ಜಿ. ಎಸ್. ಬಾಗಲಕೋಟೆ (ಜಮಖಂಡಿ).—ಮಾನ್ಯ ಗ್ರಾಮಾಭಿವೃದ್ಧಿ ಮತ್ತು ಪಂಚಾಯತ್ ಮತ್ತು ವತ್ಪ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಜಮಖಂಡಿ ತಾಲ್ಲೂಕ್ ಕೃಷ್ಣಾನದಿ ತೀರದಲ್ಲಿದ್ದು, ಅಲ್ಲಿ ಹಾಲು ಉತ್ಪಾದನೆಗೆ ಅವಕಾಶ ಗಳಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಹಾಲು ಶೇಖರಿಸುವ ಕೇಂದ್ರ ಸ್ಥಾಪಿಸುವುದು ಯೋಗ್ಯವಲ್ಲವೆ ;

ಇ) ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಶ್ರೀ ಅಬ್ದುಲ್ ನಜೀರ್ ಸಾಬ್ (ಗ್ರಾಮಾಭಿವೃದ್ಧಿ ಮತ್ತು ಪಂಚಾಯತ್ ಮಂತ್ರಿ ಮತ್ತು ವಕ್ಫ್ ಮಂತ್ರಿಗಳು).—

ಅ) ಬಂದಿದೆ.

ಆ) ಹೌದು.

ಇ) ಜಮಖಂಡಿ ತಾಲ್ಲೂಕಿನಲ್ಲಿ ಅಮೂಲ್ ಮಾದರಿಯ ಹಾಲು ಉತ್ಪಾದಕರ ಸಹಕಾರಿ ಸಂಘಗಳನ್ನು ಸ್ಥಾಪಿಸಲಾಗುತ್ತಿದೆ.

ಪ್ರಾಥಮಿಕ ಶಾಲೆಗಳಲ್ಲಿ ಜವಾನರ ಬದಲು ಶಾಲಾ ಮಕ್ಕಳಿಂದಲೇ ಕೆಲಸ ಮಾಡಿಸಂತ್ತಿರುವುದು.

೧೨೬೧. ಶ್ರೀ ಮಾಲೀಕಯ್ಯ ಗುತ್ತೇದಾರ್ (ಅಫಜಲಪುರ).—ಮಾನ್ಯ ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಅಫಜಲಪುರ ಕ್ಷೇತ್ರದಲ್ಲಿ ಎಷ್ಟು ಪ್ರಾಥಮಿಕ ಶಾಲೆಗಳಿವೆ (ಅಂಕಿ ಅಂಶಗಳೊಂದಿಗೆ ತಿಳಿಸುವುದು).

ಆ) ಎಷ್ಟು ಶಾಲೆಗಳಲ್ಲಿ ಜವಾನರಿದ್ದಾರೆ (ಅಂಕಿ ಅಂಶಗಳಲ್ಲಿ ತಿಳಿಸುವುದು)

ಇ) ಬಹಂತೇಕ ಶಾಲೆಗಳಲ್ಲಿ ಜವಾನರಿಲ್ಲದೇ ಶಾಲೆಗೆ ಬರುವ ಮಕ್ಕಳಿಂದಲೇ ಕಸಗುಡಿಸುವುದು ಇತ್ಯಾದಿ ಕೆಲಸಗಳನ್ನು ಮಾಡಿಸುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ

ಈ) ಹಾಗಿದ್ದಲ್ಲಿ ಸದರಿ ಶಾಲೆಗಳಿಗೆ ಜವಾನರನ್ನು ನೇಮಿಸಲು ಸರ್ಕಾರದವರು ಯಾವ ಕ್ರಮ ತೆಗೆದುಕೊಂಡಿದ್ದಾರೆ ?

ಶ್ರೀ ಎಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ವಯಸ್ಕರ ಶಿಕ್ಷಣ ರಾಜ್ಯ ಸಚಿವರು).—

ಅ) ಮಾದರಿ ಪ್ರಾಥಮಿಕ ಶಾಲೆಗಳು ೮
ಹಿರಿಯ ಪ್ರಾಥಮಿಕ ಶಾಲೆಗಳು ೩೫
ಕಿರಿಯ ಪ್ರಾಥಮಿಕ ಶಾಲೆಗಳು ೫೮

ಆ) ತಾಲ್ಲೂಕಿನ ಯಾವುದೇ ಪ್ರಾಥಮಿಕ ಶಾಲೆಗಳಲ್ಲಿ ಜವಾನರಿರುವುದಿಲ್ಲ.

ಇ) ಬಂದಿದೆ.

ಈ) ಪ್ರಾಥಮಿಕ ಶಾಲೆಗಳಲ್ಲಿನ ಜವಾನರ ಹುದ್ದೆಗಳನ್ನು ದಿನಾಂಕ ೧ನೇ ಏಪ್ರಿಲ್ ೧೯೭೨ರಿಂದ ರದ್ದುಪಡಿಸಲಾಗಿದೆ. ಆದುದರಿಂದ ಪ್ರಾಥಮಿಕ ಶಾಲೆಗಳಲ್ಲಿ ಜವಾನರನ್ನು ನೇಮಕ ಮಾಡುವುದು ಸಾಧ್ಯವಿಲ್ಲ.

'ರಿಂಡರ್ ಪೆಸ್ಟ್' ರೋಗದಿಂದ ಸತ್ತ ಕುರಿಗಳು.

೧೧೬೦. ಶ್ರೀ ಬಿ. ಲಕ್ಕಪ್ಪ (ಚಿಕ್ಕನಾಯಕನಹಳ್ಳಿ).—ಮಾನ್ಯ ಪಶುವೈದ್ಯ ಹಾಗೂ ಪಶು ಸಂಗೋಪನಾ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಳೆದ ಮೂರು ವರ್ಷಗಳಲ್ಲಿ ಧಾರವಾಡ, ಶಿವಮೊಗ್ಗ, ಚಿತ್ರದುರ್ಗ, ಬಳ್ಳಾರಿ, ಬೆಳಗಾಂ ಜಿಲ್ಲೆಗಳಲ್ಲಿ 'ರಿಂಡರ್‌ಪೆಸ್ಟ್' ರೋಗದಿಂದ ಸತ್ತ ಕುರಿಗಳ ಸಂಖ್ಯೆ ಎಷ್ಟು ?

ಆ) ರೋಗವನ್ನು ತಡೆಗಟ್ಟಲು ಸರ್ಕಾರದವರು ಕೈಗೊಂಡ ಮುನ್ನೆಚ್ಚರಿಕೆಯ ಕಾರ್ಯಕ್ರಮಗಳಾವುವು ?

ಇ) ಕುರಿ ಸಾಕಾಣಿಕೆಗಾರರಿಗೆ ಆದ ನಷ್ಟವನ್ನು ತುಂಬಿಕೊಡಲು ಸರ್ಕಾರದವರು ಕೈಗೊಂಡ ಕಾರ್ಯಕ್ರಮಗಳೇನು ?